# ಕರ್ನಾಟಕ ಸರ್ಕಾರದ ನಡವಳಿಗಳು

*ವಿಷಯ:* ಶಾಲಾ ಕಾಲೇಜುಗಳಲ್ಲಿ ಶಾಲಾವಧಿಯಲ್ಲಿ ಮೊಬೈಲ್ ಬಳಕೆಯನ್ನು ನಿಷೇಧಿಸುವ ಕುರಿತು.

*ಓದಲಾಗಿದೆ:* ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ದಿನಾಂಕ: 13.09.2007ರ ಟಿಪ್ಪಣಿ ಸಂಖ್ಯೆ: ಪ್ರಾ.ಪ್ರೌ.ಶಿ.ಸ/ಹೆಚ್715/2006.

- - - - -

**ಪ್ರಸ್ತಾವನೆ:**

ಮೇಲೆ ಓದಲಾದ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರ ದಿನಾಂಕ:13.09.2007ರ ಟಿಪ್ಪಣಿ ಹಾಗೂ ದಿನಾಂಕ:29.09.2007ರಂದು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು, ಇಲಾಖೆಯ ಅಧಿಕಾರಿಗಳ ಸಭೆ ನಡೆಸಿ, ಮೊಬೈಲ್ ಉಪಯೋಗ ಶಾಲಾ ಕಾಲೇಜುಗಳಲ್ಲಿ ದಿನೇ ದಿನೇ ಹೆಚ್ಚುತ್ತಿದ್ದು, ಇದು ಶಾಲಾ ಕಾಲೇಜುಗಳಲ್ಲಿಯ ಶೈಕ್ಷಣಿಕ ವಾತಾವರಣವನ್ನು ಹದಗೆಡಿಸುತ್ತಿದ್ದು, ಇದರ ದುಷ್ಪರಿಣಾಮ ಮಕ್ಕಳ ಮೇಲೆ ಬೀರುತ್ತಿದೆಯಲ್ಲದೇ, ಇದರಿಂದ ಕಲಿಕೆಯ ಅಮೂಲ್ಯ ಸಮಯವನ್ನು ಮೊಬೈಲ್ ಮಾತುಗಾರಿಕೆಯಲ್ಲಿ ವ್ಯಯವಾಗುತ್ತಿದೆಯೆಂಬ ಅಂಶ ಇಲಾಖೆಯ ಗಮನಕ್ಕೆ ಬಂದಿದೆ. ಅಲ್ಲದೇ ವಿದ್ಯಾರ್ಥಿಗಳು ಕ್ಲಾಸಿನಲ್ಲಿ ಮೊಬೈಲ್ ಬಳಸಿ ಸಂಗೀತ ಕೇಳುವುದು ಆಟವಾಡುವು ಹಾಗೂ ಎಸ್‌ಎಂಎಸ್ ಕಳುಹಿಸುವುದು ಮಾಡುತ್ತಿದ್ದು, ಇದರಿಂದ ತರಗತಿಗಳಲ್ಲಿ ಅಹಿತಕರ ವಾತಾವರಣ ಉಂಟಾಗಿ ಶೈಕ್ಷಣಿಕ ಚಟುವಟಿಕೆಗಳಿಗೆ ತೊಂದರೆ ಉಂಟಾಗುತ್ತದೆ. ಇದರೊಂದಿಗೆ ಅನೇಕ ಪಾಲಕ-ಪೋಷಕರು ಕೂಡಾ ಈ ಕುರಿತು ಅನೇಕ ಸಂದರ್ಭಗಳಲ್ಲಿ ಆತಂಕ ವ್ಯಕ್ತಪಡಿಸಿರುತ್ತಾರೆಂಬ ಅಂಶ ಸಭೆಯಲ್ಲಿ ಚರ್ಚೆಯಾಗಿ ಮಕ್ಕಳ ಕಲಿಕಾ ಸಮಯದ ರಕ್ಷಣೆಯ ಕ್ರಮವಾಗಿ ಮೊಬೈಲ್ ಉಪಯೋಗವನ್ನು ನಿಷೇದಿಸಬೇಕೆಂಬ ಒಟ್ಟಾರೆ ಅಭಿಪ್ರಾಯ ಈ ಸಭೆಯಲ್ಲಿ ವ್ಯಕ್ತವಾಗಿರುತ್ತದೆ. ಆದ್ದರಿಂದ ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಇಡಿ 226 ಎಲ್‌ಐಬಿ 2007, ಬೆಂಗಳೂರು ದಿನಾಂಕ:05.10.2007

2. ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಒಂದನೇ ತರಗತಿಯಿಂದ 12ನೇ ತರಗತಿಯವರೆಗೆ (1 ರಿಂದ 10ನೇ ತರಗತಿ ಹಾಗೂ ಪ್ರಥಮ & ದ್ವಿತೀಯ ಪಿಯುಸಿ) ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಪ್ರತಿಯೊಂದು ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳಿಗೆ ಅನ್ವಯಿಸುವಂತೆ ತಕ್ಷಣದಿಂದ ಜಾರಿಗೆ ಬರುವಂತೆ, ಮೊಬೈಲ್‌ನ್ನು ಶಾಲಾವಧಿಯಲ್ಲಿ, ಶಾಲಾ ಕಾಲೇಜುಗಳ ಆವರಣದಲ್ಲಿ ಉಪಯೋಗಿಸುವುದನ್ನು ನಿಷೇದಿಸಲಾಗಿದೆ. ಇದರೊಂದಿಗೆ ಶಾಲಾ ಕಾಲೇಜುಗಳ ಶಿಕ್ಷಕರು, ಉಪನ್ಯಾಸಕರು ಹಾಗೂ ಯಾವುದೇ ಸಿಬ್ಬಂದಿ ವರ್ಗದವರು ಕೂಡಾ ಶಾಲಾವಧಿಯಲ್ಲಿ, ಶಾಲಾ ಕಾಲೇಜುಗಳ ಆವರಣದಲ್ಲಿ ಮೊಬೈಲ್ ಬಳಸುವುದನ್ನು ನಿಷೇದಿಸಲಾಗಿದೆ. ನಿಷೇಧವನ್ನು ಉಲ್ಲಂಘಿಸಿ ವಿದ್ಯಾರ್ಥಿಗಳು, ಶಿಕ್ಷಕರು-ಉಪನ್ಯಾಸಕರು ಹಾಗೂ ಸಿಬ್ಬಂದಿಯವರು ಶಾಲಾವಧಿಯಲ್ಲಿ, ಶಾಲಾ ಆವರಣದಲ್ಲಿ ಮೊಬೈಲ್ ಬಳಸಿದಲ್ಲಿ ಅಂತಹ ಮೊಬೈಲ್‌ಗಳನ್ನು ಮುಟ್ಟುಗೋಲು ಹಾಕಿಕೊಳ್ಳತಕ್ಕದ್ದು. ಈ ನಿಷೇದವನ್ನು ಅನುಷ್ಠಾನಗೊಳಿಸಲು ಅನುಷ್ಠಾನ ಸಮಿತಿಯನ್ನು ರಚಿಸಿ, ಅವುಗಳ ಜವಾಬ್ದಾರಿ/ಅಧಿಕಾರ ವ್ಯಾಪ್ತಿ ನಿಗಧಿಪಡಿಸಿದೆ.

3. **ಅನುಷ್ಠಾನ ಸಮಿತಿ:-** ಮೇಲಿನ ಆದೇಶವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಪ್ರತಿಯೊಂದು ಶಾಲಾ ಕಾಲೇಜಿನ ಮಟ್ಟದಲ್ಲಿ ಶಾಲಾ ಕಾಲೇಜುಗಳ ಮುಖ್ಯಸ್ಥರ ಅಧ್ಯಕ್ಷತೆಯಲ್ಲಿ ಒಂದು ಮುಟ್ಟುಗೋಲು ಸಮಿತಿಯನ್ನು ರಚಿಸುವುದು. ಈ ಸಮಿತಿಯ ರಚನೆ ಕೆಳಗಿನಂತಿರುತ್ತದೆ.

1. ಶಾಲೆ/ಕಾಲೇಜಿನ ಮುಖ್ಯಸ್ಥರು - ಅಧ್ಯಕ್ಷರು
2. ಶಾಲೆ/ಕಾಲೇಜಿನ ಒಬ್ಬ ಹಿರಿಯ ಶಿಕ್ಷಕರು/ಉಪನ್ಯಾಸಕರು - ಸದಸ್ಯರು
3. ದೈಹಿಕ ಶಿಕ್ಷಕರು - ಸದಸ್ಯರು

4. **ಸಮಿತಿಯ ಅಧಿಕಾರ ವ್ಯಾಪ್ತಿ:-**

1. ಈ ಸಮಿತಿಯ ಸದಸ್ಯರೆಲ್ಲರು ಶಾಲಾ/ಕಾಲೇಜುಳ ಆವರಣದೊಳಗೆ ಶಾಲಾ ಅವಧಿಯಲ್ಲಿ ಯಾರೂ ಮೊಬೈಲ್ ತರದಂತೆ ತಡೆಗಟ್ಟುವುದು.
2. ಈ ಬಗ್ಗೆ ಎಲ್ಲಾ ವಿದ್ಯಾರ್ಥಿಗಳಿಗೆ ಹಾಗೂ ಸಿಬ್ಬಂದಿಯವರಿಗೆ ಸೂಚನೆ ಮೂಲಕ ತಿಳುವಳಿಕೆ ನೀಡುವುದು.
3. ಸೂಚನಾ ಫಲಕದ ಮೇಲೆ ಈ ವಿಷಯ ಪ್ರಮುಖವಾಗಿ ಪ್ರಕಟಿಸುವುದು.
4. ಮಕ್ಕಳ ಪಾಲಕ-ಪೋಷಕರ ಗಮನ ಸೆಳೆಯುವುದು.
5. ನಿಷೇದವಿದ್ದರು ಬಳಕೆಯಾಗುವ ಸನ್ನಿವೇಶಗಳಲ್ಲಿ ಮುಟ್ಟುಗೋಲು ಹಾಕುವುದು.
6. ಈ ಕುರಿತು ಸಂದರ್ಭಗನುಗುಣವಾಗಿ ತಕ್ಷಣದ ಅಧಿಕಾರಿಗಳಿಗೆ ವರದಿ ಮಾಡುವುದು.
7. ಅವಶ್ಯವೆಂದಲ್ಲಿ ಭಾರತ ಸಂಚಾರ ನಿಗಮ, (B.S.N.L) ಇವರಿಗೆ ಪತ್ರ ಬರೆದು ದೂರವಾಣಿ ಬೂಥ್(Coin Box) ಸ್ಥಾಪಿಸಲು ಕೋರುವುದು.

5. ರಾಜ್ಯದ ಪ್ರತಿಯೊಂದು ಜಿಲ್ಲೆಯ ಉಪನಿರ್ದೇಶಕರು (ಆಡಳಿತ) ಹಾಗೂ ಉಪನಿರ್ದೇಶಕರು (ಪದವಿ ಪೂರ್ವ ಶಿಕ್ಷಣ)ರವರುಗಳಲ್ಲಿ ತಮ್ಮ ಅಧೀನದ ಅಧಿಕಾರಿಗಳೊಂದಿಗೆ ತಮ್ಮ ಅಧೀನ ಶಾಲಾ/ಕಾಲೇಜುಗಳಿಗೆ ಭೇಟಿ ನೀಡಿದಾಗ ಮೊಬೈಲ್ ಬಳಕೆ/ಉಪಯೋಗದ ಬಗ್ಗೆ ಹೊರಡಿಸಿದ ನಿಷೇದ ಆದೇಶವನ್ನು ಅನುಷ್ಠಾನಗೊಳಿಸುವ ಹಾಗೂ ಕಾಲ ಕಾಲಕ್ಕೆ ವರದಿ ಮಾಡುವ ಅಧಿಕಾರ ಹೊಂದಿರುತ್ತಾರೆ. ರಾಜ್ಯದ ಎಲ್ಲಾ ಹಂತದ ಅಧಿಕಾರಿಗಳು ಮೇಲಿನ ನಿಷೇಧವನ್ನು ಕಡ್ಡಾಯವಾಗಿ ಅನುಷ್ಠಾನಗೊಳಿಸಲು ಈ ಮೂಲಕ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

*(ಎಂ.ಎನ್.ಸೋಮಶೇಖರ್)*
ಸರ್ಕಾರದ ಅಧೀನ ಕಾರ್ಯದರ್ಶಿಗಳು
ಶಿಕ್ಷಣ ಇಲಾಖೆ.

*ಇವರಿಗೆ:*
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು-ಮುಂದಿನ ರಾಜ್ಯ ಪತ್ರಿಕೆಯಲ್ಲಿ ಪ್ರಕಟಿಸಿ, ಅದರ 250 ಪ್ರತಿಗಳನ್ನು ಸರ್ಕಾರಕ್ಕೆ ಹಾಗೂ 1000 ಪ್ರತಿಗಳನ್ನು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ. ಇವರಿಗೆ ಕಳುಹಿಸುವಂತೆ ಕೋರಲಾಗಿದೆ.

ಪ್ರತಿ:

1) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು/ಧಾರವಾಡ/ಗುಲ್ಬರ್ಗಾ.
2) ನಿರ್ದೇಶಕರು, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು/ಧಾರವಾಡ/ಗುಲ್ಬರ್ಗಾ.
3) ಆಯುಕ್ತರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು.
4) ಎಲ್ಲಾ ಜಿಲ್ಲೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
5) ನಿರ್ದೇಶಕರು, ವಾರ್ತಾ ಮತ್ತು ಪ್ರಸಾರ ಇಲಾಖೆ, ಇನ್‌ಫೆಂಟ್ರಿ ರಸ್ತೆ, ಬೆಂಗಳೂರು.
(ಸದರಿ ಮಾಹಿತಿಗಳನ್ನು ವಿಶೇಷವಾಗಿ ಬಿತ್ತರಿಸಲು ಕ್ರಮ ಕೈಗೊಳ್ಳುವುದು)
6) ಎಲ್ಲಾ ಜಿಲ್ಲೆಯ ಕ್ಷೇತ್ರ ಶಿಕ್ಷಣಾಧಿಕಾರಿಗಳು/ಉಪ ನಿರ್ದೇಶಕರುಗಳು/ಸಹ ನಿರ್ದೇಶಕರುಗಳು.
7) ಶಿಕ್ಷಣ ಇಲಾಖೆಯ ಅಪರ ಕಾರ್ಯದರ್ಶಿಗಳು/ಉಪ ಕಾರ್ಯದರ್ಶಿ ಹಾಗೂ ಎಲ್ಲಾ ಅಧೀನ ಕಾರ್ಯದರ್ಶಿಗಳು ಮತ್ತು ಶಾಖಾಧಿಕಾರಿಗಳು.
8) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ.
9) ಸರ್ಕಾರದ ಕಾರ್ಯದರ್ಶಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಶಿಕ್ಷಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
10) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.